**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

ಕಾರ್ಯದರ್ಶಿ, ವಾರ್ಡ್ ಸಮಿತಿ /ಸಹಾಯಕ ಇಂಜಿನಿಯರ್‌ರವರ ಕಛೇರಿ, ವೃಷಭಾವತಿನಗರ ವಾರ್ಡ್–102,
3ನೇ ಮುಖ್ಯರಸ್ತೆ, ಬಿ.ಇ.ಎಮ್.ಎಲ್. ಲೇಔಟ್, ಬೆಂಗಳೂರು–79.

**ಸಂಖ್ಯೆ: ವಾ–102/ವಾ.ಸ./ಸಭಾನಡವಳಿ–16/2021–22** **ದಿನಾಂಕ: 15/05/2021**

**–:ಸಭೆಯ ನಡವಳಿಗಳು:–**

ವಿಷಯ:– ವೃಷಭಾವತಿನಗರ ವಾರ್ಡ್ ಸಂಖ್ಯೆ–102ರ ವಾರ್ಡ್ ಮಟ್ಟದ W.D.E.T.E.R.(WDC)ನ್ನು ರಚಿಸುವ ಬಗ್ಗೆ ಚರ್ಚಿಸಲು ಸಭೆಯನ್ನು ಆಯೋಜಿಸಿರುವ ಬಗ್ಗೆ.

ಉಲ್ಲೇಖ:– 1. ಮಾನ್ಯ ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ:RD 158 TNR 2020 (1), Dated: 07-05-2021
2. ಮಾನ್ಯ ಮುಖ್ಯ ಆಯುಕ್ತರ ಕಛೇರಿ ಆದೇಶ ಸಂಖ್ಯೆ:ಬಿ12(ಕೋ–19)/04/2021–22

***********

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ವೃಷಭಾವತಿನಗರ ವಾರ್ಡ್ ಸಂಖ್ಯೆ:102 ವಾರ್ಡ್ ಮಟ್ಟದ ವಿಕೇಂದ್ರಿಕೃತ ಚಿಕಿತ್ಸೆಯ ಸರದಿ ನಿರ್ಧಾರ ಮತ್ತು ತುರ್ತು ಪ್ರತಿಕ್ರಿಯೆ ಸಮಿತಿ W.D.E.T.E.R.(WDC)ಯ ರಚಿಸುವ ಬಗ್ಗೆ **ಶ್ರೀ.ಜಿ.ಪ್ರಕಾಶ್ ಸಮಿತಿಯ ಕಾರ್ಯದರ್ಶಿಗಳು ರವರು** ಕೋವಿಡ್–19 ವೈರಸ್‌ನ ಸೋಂಕಿನ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು, ಮೂಲಭೂತ ಸೌಕರ್ಯಗಳನ್ನು ಒದಗಿಸಲು ಹಾಗೂ ಸಾರ್ವಜನಿಕರ ಹಿತರಕ್ಷಣೆಗಾಗಿ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಬಗ್ಗೆ ಚರ್ಚಿಸಲು ಸಭೆಯಲ್ಲಿ ಉಪಸ್ಥಿತರಾಗಿರುವ ಮಾನ್ಯ ನೋಡಲ್ ಅಧಿಕಾರಿಯವರಿಗೆ ಮತ್ತು ಸಭೆಗೆ ಆಗಮಿಸಿರುವ ಎಲ್ಲಾ ಅಧಿಕಾರಿಗಳಿಗೆ ಹಾಗೂ ಸದಸ್ಯರುಗಳಿಗೆ ಸಭೆಗೆ ಸ್ವಾಗತ ಕೋರುತ್ತಾ, ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಸಭೆಯನ್ನು ಮುನ್ನಡೆಸಲಾಯಿತು.

**–:ಸಭೆಗೆ ಹಾಜರಿದ್ದವರು:–**

| ಕ್ರಮ ಸಂಖ್ಯೆ | ಹೆಸರು ಮತ್ತು ಪದನಾಮ |
|---|---|
| 1 | ಶ್ರೀ ಕೆ.ವಿಜಯ್ ಶೇಖರ್, ನೋಡಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ವಾರ್ಡ್ ಸಮಿತಿ, ವಾರ್ಡ್–102 |
| 2 | ಶ್ರೀ ಜಿ.ಪ್ರಕಾಶ್, ಕಾರ್ಯದರ್ಶಿ ವಾರ್ಡ್ ಸಮಿತಿ ಮತ್ತು ಸಹಾಯಕ ಅಭಿಯಂತರರು, ವಾರ್ಡ್–102. |
| 3 | ಶ್ರೀ ಜಿ.ಆರ್.ಗೋವಿಂದರಾಜುಲು, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್–102 |
| 4 | ಶ್ರೀ ಎಸ್.ಬಾಬು, ಕಿರಿಯ ಆರೋಗ್ಯ ಪರಿವೀಕ್ಷಕರು, (ಗುತ್ತಿಗೆ) ವಾರ್ಡ್–102 |
| 5 | ಶ್ರೀ ಹರೀಶ್. ಎಮ್. ಟ್ಯಾಕ್ಸ್‌ಇನ್ಸ್‌ಪೆಕ್ಟರ್, ವಾರ್ಡ್–102. |
| 6 | ಶ್ರೀ ಮಂಜುನಾಥ್. ಟ್ಯಾಕ್ಸ್‌ಇನ್ಸ್‌ಪೆಕ್ಟರ್, ವಾರ್ಡ್–102. |
| 7 | ಶ್ರೀ ಸಂತೋಷ ವಾಸುದೇವ್ ಸಬ್‌ಇನ್ಸ್‌ಪೆಕ್ಟರ್, ಕಾಮಾಕ್ಷಿಪಾಳ್ಯ ಆರಕ್ಷಕಠಾಣೆ, |
| 8 | ಶ್ರೀ ದಿನೇಶ್, ವಾಟರ್ ಇನ್ಸ್‌ಪೆಕ್ಟರ್ ಬಿ.ಡಬ್ಲ್ಯೂ.ಎಸ್.ಎಸ್.ಬಿ. |
| 9 | ಶ್ರೀ ವಿನೋದ್, ವಾರ್ಡ್ ಮಾರ್ಷಲ್, ಬಿಬಿಎಂಪಿ. |
| 10 | ಶ್ರೀ ಚಂದ್ರಪ್ಪ, ಸದಸ್ಯರು, ವಾರ್ಡ್ ಸಮಿತಿ ವಾರ್ಡ್–102 |
| 11 | ಶ್ರೀಮತಿ ಗೌರಮ್ಮ, ಸದಸ್ಯರು, ವಾರ್ಡ್ ಸಮಿತಿ, ವಾರ್ಡ್–102. |
| 12 | ಶ್ರೀಮತಿ ಸಿದ್ದಗಂಗಮ್ಮ, ಸದಸ್ಯರು, ವಾರ್ಡ್ ಸಮಿತಿ, ವಾರ್ಡ್–102. |
| 13 | ಶ್ರೀ ರಾಜ್‌ಕುಮಾರ್, ಸದಸ್ಯರು, ವಾರ್ಡ್ ಸಮಿತಿ ವಾರ್ಡ್–102 |

ಪು.ತಿ.ನೋ.

| | |
|---|---|
| 14 | ಶ್ರೀ ಹೇಮಂತಕುಮಾರ್, ಸದಸ್ಯರು, ವಾರ್ಡ್ ಸಮಿತಿ ವಾರ್ಡ್–102 |
| 15 | ಶ್ರೀ ರಂಗನಾಥ, ಸದಸ್ಯರು, ವಾರ್ಡ್ ಸಮಿತಿ ವಾರ್ಡ್–102 |
| 16 | ಶ್ರೀ ಬಿ.ವಿ.ಸೋಮಶೇಖರ್, ಸದಸ್ಯರು, ವಾರ್ಡ್ ಸಮಿತಿ ವಾರ್ಡ್–102 |

**ಸಭೆಯಲ್ಲಿ ಚರ್ಚಿಸಲಾದ ವಿಷಯಗಳು:**

➢ ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಕೋವಿಡ್–19 ಸಾಂಕ್ರಾಮಿಕ ರೋಗವನ್ನು ತಡೆಗಟ್ಟಲು ಮಾನ್ಯ ಮುಖ್ಯ ಆಯುಕ್ತರವರ ಕಛೇರಿ ಆದೇಶ ಸಂಖ್ಯೆ: ಬಿ12(ಕೋ–19)/04/2021–22 ರಂತೆ ಪಾಲಿಕೆ ಎಲ್ಲಾ ವಾರ್ಡ್‌ಗಳ ವ್ಯಾಪ್ತಿಯಲ್ಲಿ ವಾರ್ಡ್ ಮಟ್ಟದ ವಿಕೇಂದ್ರಿಕೃತ ಚಿಕಿತ್ಸೆಯ ಸರದಿ ನಿರ್ಧಾರ ಮತ್ತು ತುರ್ತು ಪ್ರತಿಕ್ರಿಯೆ ಸಮಿತಿ W.D.E.T.E.R.(WDC)ಯ ರಚಿಸುವ ಕುರಿತು ಮಾನ್ಯ ಮುಖ್ಯ ಆಯುಕ್ತರ ಆದೇಶದಂತೆ

➢ ಇಂದು ತುರ್ತಾಗಿ ಮಾನ್ಯ ಮುಖ್ಯ ಆಯುಕ್ತರು ಬಿಬಿಎಂಪಿ ರವರ ಆದೇಶದಂತೆ ತುರ್ತಾಗಿ WDCನ್ನು ರಚಿಸುವ ಬಗ್ಗೆ ಸದರಿ ಸಮಿತಿ ಕಾರ್ಯನಡೆಸುವ ಕಛೇರಿ ಹಾಗೂ ಎನ್.ಜಿ.ಓ ಆರ್.ಡಬ್ಲ್ಯೂ.ಎ ಸ್ವಯಂ ಸೇವಕರು ಮತ್ತು ಇತರೆ ಅಧಿಕಾರಿಗಳ ನೇಮಕಾತಿ ಕುರಿತಂತೆ ಚರ್ಚಿಸಲು ತುರ್ತಾಗಿ ಸಭೆ ಕರೆಯಲಾಯಿತು

➢ ಅದರಂತೆ ಕೆಳಕಂಡ ಅಧಿಕಾರಿ/ ಸದಸ್ಯರುಗಳ ಸಮಿತಿಯನ್ನು ರಚಿಸಲು ಸೂಚಿಸಲಾಗಿರುತ್ತದೆ ಎಂದು ಸಭೆಯಲ್ಲಿ ತಿಳಿಸಿದರು.

| | |
|---|---|
| ನೋಡಲ್ ಅಧಿಕಾರಿ | ಅಧ್ಯಕ್ಷರು |
| ವಾರ್ಡ್‌ನ ಸಹಾಯಕ ಅಭಿಯಂತರರು | ಸದಸ್ಯ ಕಾರ್ಯದರ್ಶಿ |
| ವಾರ್ಡ್‌ಗೆ ಸಂಬಂಧಿಸಿದ ಇತರೇ ಎಲ್ಲಾ ಅಧಿಕಾರಿಗಳು | ಸದಸ್ಯರು |
| ವಾರ್ಡ್‌ನಲ್ಲಿನ ಸಾಮಾಜಿಕ ಕಲ್ಯಾಣ ಅಸೋಸಿಯೇಷನ್‌ಗಳು | ಸದಸ್ಯರು |
| ಸ್ವಯಂಸೇವಕರು | ಸದಸ್ಯರು |

➢ ಮುಂದುವರೆದು, ಮಾನ್ಯ ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ:RD 158 TNR 2020 (1), Dated: 07-05-2021 ರಂತೆ ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್ ಸೋಂಕಿತ ರೋಗಿಗಳಿಗೆ ಅಗತ್ಯ ಚಿಕಿತ್ಸೆ ದೊರಕಿಸಿಕೊಡುವ ನಿಟ್ಟಿನಲ್ಲಿ Triage Room ಅನ್ನು ರಚಿಸಬೇಕಾಗಿರುತ್ತದೆ. ಆದುದರಿಂದ ನಮ್ಮ ವಾರ್ಡ್ ವ್ಯಾಪ್ತಿಯಲ್ಲಿ ಸೂಕ್ತವಾದ ಸ್ಥಳವನ್ನು ಗುರುತಿಸುವುದು ಅಗತ್ಯವಾಗಿರುತ್ತದೆ ಎಂದು ಸಭೆ ತಿಳಿಸಿದರು.

➢ ಶ್ರೀ.ಜಿ.ಪ್ರಕಾಶ್ ಸಮಿತಿಯ ಕಾರ್ಯದರ್ಶಿಯವರು, ಶ್ರೀ.ಹೆಚ್.ರಂಗನಾಥ ಸಹಾಯಕ ಕಾರ್ಯಪಾಲಕ ಅಭಿಯಂತರರು ನಾಗಪುರ ಉಪವಿಭಾಗ, ಶ್ರೀ. ಗೋವಿಂದರಾಜುಲು. ಹಿರಿಯ ಆರೋಗ್ಯ ಪರಿವೀಕ್ಷಕರು ಮತ್ತು ಶ್ರೀ ಹರೀಶ್.ಎಂ ಟ್ಯಾಕ್ಸ್‌ಇನ್ಸ್‌ಪೆಕ್ಟರ್, ರವರು ಮಾತನಾಡುತ್ತಾ, ಕಾಮಾಕ್ಷಿಪಾಳ್ಯ ಮುಖ್ಯರಸ್ತೆಯಲ್ಲಿ ಇರುವ ಸರ್ಕಾರಿ ಶಾಲೆಯ ಕಟ್ಟಡವನ್ನು Triage Room ರಚಿಸಲು ಸೂಕ್ತವಾಗಿರುವುದಾಗಿ ಸಭೆಯಲ್ಲಿ ತಿಳಿಸಿದರು.

➢ ಕಾಮಾಕ್ಷಿಪಾಳ್ಯ ಮುಖ್ಯರಸ್ತೆಯಲ್ಲಿ ಇರುವ ಸರ್ಕಾರಿ ಶಾಲೆಯ ಕಟ್ಟಡವನ್ನು ಪರಿಶೀಲಿಸಲಾಯಿತು ಹಾಗೂ ಸಂಬಂಧಿತ ನಿರ್ವಹಣಾ ಸಮಾಲೋಚಕರೊಂದಿಗೆ Triage Room ಆಯೋಜಿಸುವ ಬಗ್ಗೆ ಚರ್ಚಿಸಲಾಯಿತು.

1) **ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ:-**

- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗದ 2ನೇ ಅಲೆಯನ್ನು ಹತೋಟಿಗೆ ತರಲು ತೆಗೆದುಕೊಂಡಿರುವ ಮುನ್ನೆಚ್ಚರಿಕೆ ಕ್ರಮಗಳು ಹಾಗೂ ಲಸಿಕೆ ಅಭಿಯಾನದ ಬಗ್ಗೆ ಸಭೆಯಲ್ಲಿ ತಿಳಿಸುವಂತೆ ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ತಿಳಿಸಿದರು.
- ಶ್ರೀ.ಗೋವಿಂದರಾಜುಲು, ಹಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡುತ್ತಾ, ಸದರಿ ವಾರ್ಡ್‌ನಲ್ಲಿ ಅಂದರೆ ಕಳೆದ 15 ದಿನಗಳಿಂದ ಇಲ್ಲಿಯವರೆವಿಗೆ ಒಟ್ಟು 135 ಕೋವಿಡ್ ಸೋಂಕಿತರು ಪತ್ತೆಯಾಗಿದ್ದು, ಅದರಲ್ಲಿ 09 ಜನ ಸೋಂಕಿತರನ್ನು ಹಾಸ್ಪಿಟಲೈಜೇಷನ್ ಹಾಗೂ ಉಳಿದ 126 ಜನ ಸೋಂಕಿತರನ್ನು ಹೋಮ್‌ಐಸೋಲೇಷನ್‌ನಲ್ಲಿ ಇರಿಸಲಾಗಿದೆ ಮತ್ತು 08 ಜನರು ಸಾವಿಗೀಡಾಗಿರುತ್ತಾರೆ ಎಂದು ತಿಳಿಸುತ್ತಾ, ಎಸ್.ಓ.ಪಿ.ಪ್ರಕಾರ ಸೂಕ್ತ ಕ್ರಮ ಕೈಗೊಳ್ಳುತ್ತಿದ್ದೇವೆ ಎಂದು ಸಭೆಯಲ್ಲಿ ತಿಳಿಸಿದರು.
- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ 45 ವರ್ಷ ಮೇಲ್ಪಟ್ಟ ನಾಗರೀಕರಿಗೆ ವ್ಯಾಕ್ಸಿನೇಷನ್ ಮಾಡುವ ಕಾರ್ಯದ ಪ್ರಗತಿಯ ಬಗ್ಗೆ ತಿಳಿಸುವಂತೆ ಹೇಳಿದರು.
- ಶ್ರೀ.ಗೋವಿಂದರಾಜುಲು, ಹಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡುತ್ತಾ, ಡಾ॥ ಶೋಭಾ ರವರ ನೇತೃತ್ವದಲ್ಲಿ ಮಾರುತಿ ಶಾಲೆ, ಕಾಮಾಕ್ಷಿಪಾಳ್ಯ ಸರ್ಕಾರಿ ಶಾಲೆಯ ಆವರಣ ಮತ್ತು ವಾರ್ಡ್ ಕಛೇರಿ ಆವರಣದಲ್ಲಿ ಟೆಸ್ಟಿಂಗ್ ಹಾಗೂ ವ್ಯಾಕ್ಸಿನೇಷನ್ ಮಾಡುವ ಕಾರ್ಯ ಕೈಗೊಳ್ಳಲಾಗುತ್ತಿದೆ ಎಂದು ಸಭೆಯಲ್ಲಿ ತಿಳಿಸಿದರು.
- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಹೆಚ್ಚಾಗಿ ಜನ ಸೇರುವಂತಹ ಸ್ಥಳಗಳಾದ ಮಾರುಕಟ್ಟೆಗಳು ಅಂಗಡಿಮುಂಗಟ್ಟು ಸ್ಥಳಗಳಲ್ಲಿ ಸಾರ್ವಜನಿಕರು ಸಾಮಾಜಿಕ ಅಂತರವನ್ನು ಕಾಯ್ದುಕೊಳ್ಳಬೇಕೆಂದು ಅರಿವು ಮೂಡಿಸಬೇಕೆಂದು ಮಾರ್ಷಲ್ಸ್‌ಗಳಿಗೆ ಸೂಚಿಸಿದರು.
- ಶ್ರೀ.ವಿನೋದ್, ವಾರ್ಡ್ ಮಾರ್ಷಲ್ ರವರು ಮಾತನಾಡುತ್ತಾ, ಈಗಾಗಲೇ ಕಲ್ಯಾಣ ಮಂಟಪಗಳಿಗೆ ಹಾಗೂ ಇತರೆ ಜನ ಸಂದಣಿ ಹೆಚ್ಚಾಗಿ ಕಂಡುಬರುವ ಸ್ಥಳಗಳಿಗೆ ಕೋವಿಡ್-19 ಸಾಂಕ್ರಾಮಿಕ ರೋಗದ ಮುನ್ನೆಚ್ಚರಿಕೆ ಕ್ರಮಗಳ ಪ್ರಕಟಣೆ ಹೊರಡಿಸಲಾಗಿದ್ದು, ಸಭೆ ಸಮಾರಂಭಗಳು ನಡೆಯುವ ಸ್ಥಳಗಳಿಗೆ ಭೇಟಿ ನೀಡಿ ಜಾಗೃತಿ ಮೂಡಿಸಲಾಗುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು.
- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಬರುವ ಕೆಲವು ಹೋಟೆಲ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕರಿಗೆ ಕೋವಿಡ್ ಟೆಸ್ಟ್ ಮಾಡಿಸುವಂತೆ ಹಿರಿಯ ಆರೋಗ್ಯ ಪರಿವೀಕ್ಷಕರವರಿಗೆ ತಿಳಿಸಿದರು.
- ಶ್ರೀ.ಗೋವಿಂದರಾಜುಲು, ಹಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡುತ್ತಾ, ಈಗಾಗಲೇ ಕೆಲವು ಹೋಟೆಲ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕರಿಗೆ ಕೋವಿಡ್ ಟೆಸ್ಟ್ ಮಾಡಿಸಲಾಗಿರುತ್ತದೆ ಮುಂದಿನ ದಿನಗಳಲ್ಲಿ ಉಳಿದ ಹೋಟೆಲ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕರಿಗೆ ಕೋವಿಡ್ ಟೆಸ್ಟ್ ಮಾಡಿಸಲಾಗುವುದು ಎಂದು ಸಭೆಯಲ್ಲಿ ತಿಳಿಸಿದರು.
- ಶ್ರೀ.ರಾಜ್‌ಕುಮಾರ್, ಶ್ರೀ. ಚಂದ್ರಪ್ಪ, ಹಾಗೂ ಇತರೇ ವಾರ್ಡ್ ಸಮಿತಿ ಸದಸ್ಯರುಗಳು ಮಾತನಾಡುತ್ತಾ, ಹೋಮ್‌ಐಸೋಲೇಷನ್‌ನಲ್ಲಿ ಇರುವವಂತಹ ಕೋವಿಡ್ ಸೋಂಕಿತ ರೋಗಿಗಳ ಗುರುತುಪತ್ತೆ ಹಚ್ಚಲು ಆಶಾ ಕಾರ್ಯಕರ್ತೆಯರು ಹಾಗೂ ಲಿಂಕ್ ವರ್ಕ್‌ಗಳೊಂದಿಗೆ ಬೂತ್‌ಮಟ್ಟದಲ್ಲಿ ಕಾರ್ಯನಿರ್ವಹಿಸುವಂತಹ ಸ್ವಯಂ ಸೇವಕರೊಂದಿಗೆ ಮಾಹಿತಿಯನ್ನು ನೀಡುವಂತೆ ಹಿರಿಯ ಆರೋಗ್ಯ ಪರಿವೀಕ್ಷಕರವರಿಗೆ ತಿಳಿಸಿದರು.

- ಶ್ರೀ.ಗೋವಿಂದರಾಜುಲು, ಹಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡುತ್ತಾ, ಪ್ರೈಮರಿ ಹೆಲ್ತ್‌ಸೆಂಟರ್‌ಗಳಲ್ಲಿ ಆಶಾ ಕಾರ್ಯಕರ್ತೆಯರು, ಲಿಂಕ್ ವರ್ಕ್‌ಗಳು ಮತ್ತು ಸ್ವಯಂಸೇವಕರ ಮೂಲಕ ವಾರ್ಡ್ ವ್ಯಾಪ್ತಿಯಲ್ಲಿರುವ ಕೋವಿಡ್ ಸೋಂಕಿತ ರೋಗಿಗಳಿಗೆ ಮಾತ್ರೆಗಳನ್ನು ತಲುಪಿಸುವ ಕಾರ್ಯವನ್ನು ಕೈಗೊಳ್ಳಲಾಗಿರುತ್ತದೆ ಹಾಗೂ ಮುಂದಿನ ದಿನಗಳಲ್ಲಿ ಸ್ವಯಂ ಸೇವಕರೊಂದಿಗೆ ಮಾಹಿತಿಯನ್ನು ನೀಡಲು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಸಭೆಯಲ್ಲಿ ತಿಳಿಸಿದರು.
- ಶ್ರೀ.ರಾಜ್‌ಕುಮಾರ್, ಶ್ರೀಮತಿ. ಗೌರಮ್ಮ, ಮತ್ತು ಶ್ರೀ. ರಂಗನಾಥ್ ವಾರ್ಡ್ ಸಮಿತಿ ಸದಸ್ಯರು ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಸ್ಯಾನಿಟೈಜೇಷನ್ ಕಾರ್ಯವನ್ನು ತುರ್ತಾಗಿ ಮಾಡುವಂತೆ ಸಭೆಯಲ್ಲಿ ತಿಳಿಸಿದರು.
- ಶ್ರೀ.ಜಿ.ಪ್ರಕಾಶ್, ಸಹಾಯಕ ಅಭಿಯಂತರರು ಮಾತನಾಡುತ್ತಾ, ಈಗಾಗಲೇ ಮಾನ್ಯ ಸಚಿವರ ಮೌಖಿಕ ಆದೇಶದಂತೆ ಈಗಾಗಲೇ ವಾರ್ಡ್ ನಂ:102ರ ವ್ಯಾಪ್ತಿಯಲ್ಲಿ ಮುಖ್ಯರಸ್ತೆ ಮತ್ತು ಅಡ್ಡರಸ್ತೆಗಳಲ್ಲಿ ಸ್ಯಾನಿಟೈಜೇಷನ್ ಕಾರ್ಯವನ್ನು ಕೈಗೊಳ್ಳಲಾಗುತ್ತಿದೆ ಎಂದು ಸಭೆಯಲ್ಲಿ ತಿಳಿಸಿದರು.

**2. ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ಬಗ್ಗೆ**

- ಶ್ರೀ ಚಂದ್ರಪ್ಪ ಮತ್ತು ಶ್ರೀ.ರಾಜ್‌ಕುಮಾರ್ ವಾರ್ಡ್ ಸಮಿತಿ ಸದಸ್ಯರು ರವರು ಮಾತನಾಡುತ್ತಾ, 4ನೇ ಜಿ ಕ್ರಾಸ್, ಮಾರುತಿನಗರ, ಚಂದ್ರಪ್ಪ ರಸ್ತೆ ಮತ್ತು ಮಾರಮ್ಮ ರಸ್ತೆಗಳಲ್ಲಿ ಮ್ಯಾನ್‌ಹೋಲ್‌ನಿಂದ ತೆಗೆದ ಸಿಲ್ಟ್‌ಗಳನ್ನು ರಸ್ತೆ ಬದಿಯಲ್ಲಿಯೇ ಹಾಕಿದ್ದು, ಇದರಿಂದ ದುರ್ವಾಸನೆ ಬರುತ್ತಿದ್ದು, ಕೂಡಲೇ ತೆರವುಗೊಳಿಸುವಂತೆ ಸಭೆಯಲ್ಲಿ ತಿಳಿಸಿದರು.
- ಮಾನ್ಯ ನೋಡಲ್ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದ ಶ್ರೀ.ದಿನೇಶ್, ವಾಟರ್ ಇನ್ಸ್‌ಪೆಕ್ಟರ್ ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಕೂಡಲೇ ಕ್ರಮ ಕೈಗೊಂಡು ವರದಿ ನೀಡುವಂತೆ ಸಭೆಯಲ್ಲಿ ತಿಳಿಸಿದರು.
- ಶ್ರೀ ರಾಜ್‌ಕುಮಾರ್ ಹಾಗೂ ಶ್ರೀ ಚಂದ್ರಪ್ಪ, ವಾರ್ಡ್ ಸಮಿತಿ ಸದಸ್ಯರು ರವರು ಮಾತನಾಡುತ್ತಾ, ಸಣ್ಣಕ್ಕಿಬಯಲು, ಗಂಗಣ್ಣ ಬಡಾವಣೆ, ಮಾರುತಿನಗರ ಮತ್ತು ವಿನಾಯಕನಗರ ವ್ಯಾಪ್ತಿಯಲ್ಲಿ ಕೆಲವು ಕೊಳವೆಬಾವಿಗಳು ಕೆಟ್ಟುಹೋಗಿದ್ದು ಇದರಿಂದ ಕುಡಿಯುವ ನೀರಿಗೆ ತುಂಬಾ ಅಭಾವ ಉಂಟಾಗಿದ್ದು, ಸದರಿ ಕೊಳವೆಬಾವಿಗಳ ದುರಸ್ಥಿಪಡಿಸುವ ಕಾರ್ಯವನ್ನು ತುರ್ತಾಗಿ ಕೈಗೊಳ್ಳಲು ಸಭೆಯಲ್ಲಿ ತಿಳಿಸಿದರು.
- ಬಿ.ಡಬ್ಲ್ಯೂ.ಎಸ್.ಎಸ್.ಬಿ ನಿರ್ವಹಣೆಯ ಗುತ್ತಿಗೆದಾರರಾದ ಶ್ರೀ. ರಾಘವೇಂದ್ರ ರವರು ಕೊಳವೆಬಾವಿಗಳ ನಿರ್ವಹಣೆಯ ಕಾರ್ಯವನ್ನು ಕೈಗೆತ್ತಿಕೊಳ್ಳಲಾಗಿದ್ದು, ತುರ್ತಾಗಿ ಕೊಳವೆಬಾವಿಗಳ ದುರಸ್ಥಿ ಕಾರ್ಯ ಕೈಗೊಂಡು ವರದಿಯನ್ನು ನೀಡಲಾಗುವುದು ಎಂದು ಸಭೆಯಲ್ಲಿ ತಿಳಿಸಿದರು.

**3) ಕಾಮಗಾರಿ ವಿಭಾಗದ ಬಗ್ಗೆ:-**

- ಶ್ರೀ. ಸಂತೋಷವಾಸುದೇವ್ ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ರವರು ಮಾತನಾಡುತ್ತಾ, ಸಿಸಿ ಕ್ಯಾಮೆರಾ ಟಿವಿಗಳನ್ನು ದುರಸ್ಥಿ ಮಾಡಿಸುವಂತೆ ಸಭೆಯಲ್ಲಿ ಕೋರಿದ್ದರು.
- ಶ್ರೀ.ಜಿ.ಪ್ರಕಾಶ್, ಸಹಾಯಕ ಅಭಿಯಂತರರು ಮಾತನಾಡುತ್ತಾ, ಸಿಸಿ ಕ್ಯಾಮೆರಾವನ್ನು ಅಳವಡಿಸುವ ಕಾಮಗಾರಿಯು ಪ್ರಗತಿಯಲ್ಲಿದ್ದು, ಲಾಕ್‌ಡೌನ್ ಮುಗಿದ ನಂತರದಲ್ಲಿ ದುರಸ್ಥಿ ಕಾರ್ಯವನ್ನು ಮುಂದಿನ ದಿನಗಳಲ್ಲಿ ಕೈಗೊಳ್ಳಲಾಗುವುದು ಎಂದು ಸಭೆಯಲ್ಲಿ ತಿಳಿಸಿದರು.

**4) ಘನತ್ಯಾಜ್ಯ ನಿರ್ವಹಣೆ ವಿಭಾಗದ ಬಗ್ಗೆ:-**

- ಶ್ರೀ ಎಸ್. ಬಾಬು, ಕಿರಿಯ ಆರೋಗ್ಯ ಪರಿವೀಕ್ಷಕರು ರವರು ಮಾತನಾಡುತ್ತಾ, ಹೊಸದಾಗಿ ಟೆಂಡರ್ ಅನುಮೋದನೆಯಾಗಿದ್ದು, ಅದರಲ್ಲಿ 22 ಹೊಸ ಆಟೋ, 2 ವೆಟ್ ಕಾಂಪ್ಯಾಕ್ಟರ್‌ಗಳು ಮತ್ತು 1 ಡ್ರೈ ಕಾಂಪ್ಯಾಕ್ಟರ್‌ಗಳು ಕಾರ್ಯಾಚರಣೆಯಲ್ಲಿರುತ್ತವೆ ಎಂದು ಸಭೆಯಲ್ಲಿ ತಿಳಿಸಿದರು.
- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಕಸ ನಿರ್ವಹಣೆಯಲ್ಲಿ ಏನಾದರು ಸಮಸ್ಯೆಗಳಿದ್ದಲ್ಲಿ ಸಭೆಯಲ್ಲಿ ಚರ್ಚಿಸುವಂತೆ ಎಲ್ಲಾ ಸದಸ್ಯರುಗಳಿಗೆ ಸೂಚಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಕಸ ವಿಲೇವಾರಿ ಹಾಗೂ ನಿರ್ವಹಣೆಯಲ್ಲಿ ಸದ್ಯಕ್ಕೆ ಯಾವುದೇ ಸಮಸ್ಯೆ ಇರುವುದಿಲ್ಲವೆಂದು ಎಲ್ಲಾ ಸದಸ್ಯರು ಸಭೆಯಲ್ಲಿ ತಿಳಿಸಿದರು.

ಮುಂದುವರೆದು, ಪ್ರತಿ ಸಭೆಯ ಸಭಾ ನಡವಳಿಗಳನ್ನು ಸಮಿತಿಯ ಎಲ್ಲಾ ಸದಸ್ಯರುಗಳಿಗೆ ತಲುಪುವಂತೆ ಮಾಡಲು ಕಾರ್ಯದರ್ಶಿ ರವರಿಗೆ ಸೂಚಿಸಿದರು. ಸಮಿತಿಯ ಎಲ್ಲಾ ಸದಸ್ಯರುಗಳು ತಮಗೆ ವಹಿಸಿದ ಕಾರ್ಯಗಳನ್ನು ಸೂಕ್ತವಾಗಿ ನಿಯಂತ್ರಿಸುವಂತೆ ಸೂಚಿಸುತ್ತಾ, ಸಭೆಯನ್ನು ಮುಕ್ತಾಯಗೊಳಿಸಲಾಯಿತು. ಸಭೆಯ ಕೊನೆಯಲ್ಲಿ ಸಮಿತಿ ಕಾರ್ಯದರ್ಶಿ ರವರು ಸಮಿತಿ ಸಭೆಗೆ ಆಗಮಿಸಿರುವ ಎಲ್ಲರಿಗೂ ವಂದಿಸಿದರು.

**ಕಾರ್ಯದರ್ಶಿ**
ಹಾಗೂ ಸಹಾಯಕ ಅಭಿಯಂತರರು,
ವಾರ್ಡ್ ಸಂಖ್ಯೆ-102

**ನೋಡಲ್ ಅಧಿಕಾರಿಗಳು**
ವಾರ್ಡ್ ಸಮಿತಿ, ವಾರ್ಡ್-102

<u>ಪ್ರತಿಯನ್ನು</u> :-

1) ಮಾನ್ಯ ವಲಯ ವಿಶೇಷ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
2) ಮಾನ್ಯ ಜಂಟಿ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
3) ಮಾನ್ಯ ಮುಖ್ಯ ಅಭಿಯಂತರರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ತಾಂತ್ರಿಕ ಸಹಾಯಕರಿಗೆ ಸಲ್ಲಿಸಿದೆ.
4) ಮಾನ್ಯ ಆರೋಗ್ಯ ಅಧಿಕಾರಿಗಳು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
5) ಮಾನ್ಯ ಅಧೀಕ್ಷಕ ಅಭಿಯಂತರರು, (ಘನತ್ಯಾಜ್ಯ ನಿರ್ವಹಣೆ) ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
6) ಮಾನ್ಯ ಅರಣ್ಯಾಧಿಕಾರಿಗಳು, ಅರಣ್ಯ ವಿಭಾಗ ರವರಿಗೆ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
7) ಮಾನ್ಯ ಅಧೀಕ್ಷಕರು, ತೋಟಗಾರಿಕೆ ಇಲಾಖೆ ರವರ ಅವಗಾಹನೆಗೆ ಹಾಗೂ ಅಗತ್ಯ ಕ್ರಮಕ್ಕಾಗಿ ಸಹಾಯಕರಿಗೆ ಸಲ್ಲಿಸಿದೆ.
8) ವೈದ್ಯಕೀಯ ಆರೋಗ್ಯ ಅಧಿಕಾರಿಗಳು, (ಪಶ್ಚಿಮ ವಲಯ) ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
9) ಕಾರ್ಯಪಾಲಕ ಅಭಿಯಂತರರು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
10) ಕಂದಾಯ ಅಧಿಕಾರಿಗಳು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
11) ಸಹಾಯಕ ಕಾರ್ಯಪಾಲಕ ಅಭಿಯಂತರರು ನಾಗಪುರ ಉಪವಿಭಾಗ ರವರಿಗೆ ಸೂಕ್ತ ಕ್ರಮವಹಿಸಲು ಸಲ್ಲಿಸಿದೆ.
12) ಸಹಾಯಕ ಕಂದಾಯ ಅಧಿಕಾರಿಗಳು ನಾಗಪುರ ಉಪವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
13) ಸಹಾಯಕ ಕಾರ್ಯಪಾಲಕ ಅಭಿಯಂತರರು (ಪರಿಸರ ವಿಭಾಗ) ನಾಗಪುರ ಉಪವಿಭಾಗ ರವರ ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
14) ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ವಿಭಾಗ ರವರಿಗೆ ಸೂಕ್ತ ಕ್ರಮ ವಹಿಸಲು ಸಲ್ಲಿಸಿದೆ.
15) ಎಲ್ಲಾ ಸಂಬಂಧಪಟ್ಟವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
16) ಕಛೇರಿಯ ಕಡತಕ್ಕೆ.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವಾ-102 [illegible], 15/5/2021

ದಿನಾಂಕ:-15/5/2021 ರಂದು ವಾರ್ಡ್ ಮಟ್ಟದ ವಾರ್ಡ್ ಸಮಿತಿ ಸಭೆಯಲ್ಲಿ

ಭಾಗವಹಿಸಿದ ಅಧಿಕಾರಿಗಳು ಹಾಗು ಸದಸ್ಯರ ಹಾಜರಾತಿ ಪಟ್ಟಿ.

| Sl No | Name | Designation | Mobile no | Signature |
|---|---|---|---|---|
| 1 | Vijay shekar. K. | Nodal officer | 9448670084 | [signature] 15/5/2021 |
| 2 | PRAKASH. G | AE W-102 | | [signature] |
| 3 | BABU. S | JHI 102 | 9632549664 | S. Babu |
| 4 | Govindharaju | SHI 102 | 9845512187 | [signature] |
| 5 | Santhosh vasudev | Sub inspector | 9380605102 | [signature] PSI |
| 6 | Dinesh | water Inspector | 9945421088 | [signature] |
| 7 | Gowramma | | 9740249333 | K. Gowri |
| 8 | Siddhagangamma | | 9902399781 | ಸಿದ್ದಗಂಗಮ್ಮ |
| 9 | SIDDARAJU. | AE (Ele) ಉಪ-1 K. Palya. N | 9449870177 | [signature] |
| 10 | K.R Kumar | K.M.P.S | 9845201037 | K.R Kumar 15/5/2021 |
| 11 | Ranganath. c. | Comittee member | 9341199998 | [signature] |
| 12 | RAJ kumar | | 8553721344 | [signature] |
| 13 | CHANDRAPPA | Member | 9845763281 | [signature] |
| 14 | B.V. Somashekhar | president - 102 | 9535029789 | B.V. Somashekhar |
| 15 | Vinod. S | marshal | 9663084662 | Vinod S |
| 16 | Hemanth Kumar | | 9741992319 | [signature] |
| 17 | Raghavendra | BWSSB | 9986449988 | [signature] |
| 18 | | | | |
| 19 | | | | |
| 20 | | | | |